# ಭಾಗ – 1

# ವಿಧಾನ ಮಂಡಲದ ಸುದ್ದಿಗಳು

## 1. ವಿಧಾನ ಸಭಾಧ್ಯಕ್ಷರಿಗೆ ಪರಮೋಚ್ಚ ಅಧಿಕಾರವಿರಲಿ

### ಪಕ್ಷಾಂತರ ನಿಷೇಧ ಕಾಯ್ದೆ: ಸ್ಪೀಕರ್ ಬಳಿ ಸಂಸದೀಯ ಗಣ್ಯರ ಅಭಿಪ್ರಾಯ

ಪಕ್ಷಾಂತರ ನಿಷೇಧ ಕಾಯ್ದೆಯನ್ನು ಇನ್ನಷ್ಟು ಕಠಿಣಗೊಳಿಸಲು ಲೋಕಸಭಾಧ್ಯಕ್ಷರಾದ ಅಖಿಲ ಭಾರತ ಪೀಠಾಸೀನಾಧಿಕಾರಿಗಳ ಸಮ್ಮೇಳನದ ಅಧ್ಯಕ್ಷರಾದ ಓಂ ಬಿರ್ಲಾ ಅವರು ರಾಜಸ್ಥಾನದ ವಿಧಾನ ಸಭಾಧ್ಯಕ್ಷ ಡಾ. ಸಿ.ಪಿ. ಜೋಷಿ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿದ್ದಾರೆ. ಆ ಸಮಿತಿ ಸದಸ್ಯನಾದ ನನಗೆ ಕಾಯ್ದೆ ಬದಲಾವಣೆಯ ಅಂಶಗಳ ಬಗ್ಗೆ ವರದಿ ಸಲ್ಲಿಸಲು ಸೂಚಿಸಲಾಗಿದೆ. ಈ ಹಿನ್ನೆಲೆಯಲ್ಲಿ ಸಭೆ ಆಯೋಜಿಸಲಾಗಿದೆ ಎಂದು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು. ಸಭೆಯಲ್ಲಿದ್ದ ಮುಖ್ಯಮಂತ್ರಿಯವರು ಆರೋಗ್ಯಕರ ಜನತಾಂತ್ರಿಕ ವ್ಯವಸ್ಥೆಗೆ ಪಕ್ಷಾಂತರ ಒಂದು ಶಾಪ. 1960ರ ದಶಕದಲ್ಲಿ ಆರಂಭವಾದ ಪಕ್ಷಾಂತರ ಪಿಡುಗಿನಿಂದ ದೇಶದ ಉದ್ದಗಲಕ್ಕೆ ಅನೇಕ ಸರ್ಕಾರಗಳು ಅಧಿಕಾರ ಕಳೆದುಕೊಳ್ಳಬೇಕಾಯಿತು. ಕೇಂದ್ರದಲ್ಲಿ ಅಧಿಕಾರ ಹಿಡಿದ ರಾಜಕೀಯ ಪಕ್ಷಗಳು ತಮ್ಮ ತಾಳಕ್ಕೆ ಕುಣಿಯದ ರಾಜ್ಯ ಸರ್ಕಾರಗಳನ್ನು ಪಕ್ಷಾಂತರಕ್ಕೆ ಪ್ರಚೋದಿಸಿ ಉರುಳಿಸುತ್ತಿದ್ದುದು ಸಾಮಾನ್ಯ ಪ್ರಕ್ರಿಯೆಯಾಗಿತ್ತು. ಇಂತಹ ಸಂದರ್ಭದಲ್ಲಿ 1985ರಲ್ಲಿ ಅಂದಿನ ಪ್ರಧಾನಿ ರಾಜೀವ್ ಗಾಂಧಿ ಸರ್ಕಾರ 52ನೇ ತಿದ್ದುಪಡಿ ಮೂಲಕ 10ನೇ ಅನುಸೂಚಿ ಅನ್ವಯ ಪಕ್ಷಾಂತರ ನಿಷೇಧ ಕಾಯ್ದೆ ಜಾರಿಗೊಳಿಸಿತು ಎಂದು ಹೇಳಿದರು.

ಪಕ್ಷಾಂತರ ನಿಷೇಧ ಕಾಯ್ದೆಯಡಿ ಅನರ್ಹತೆ ಸಂಬಂಧ ವಿಧಾನ ಸಭಾಧ್ಯಕ್ಷರಿಗೆ ಪರಮೋಚ್ಚ ಅಧಿಕಾರವಿರಬೇಕು. ಕಾಲಮಿತಿಯಲ್ಲಿ ಅನರ್ಹತೆ ಪ್ರಕರಣಗಳ ವಿಚಾರಣೆ ಮುಗಿಯಬೇಕು. ರಾಜೀನಾಮೆ ನೀಡದ ಶಾಸಕರು ಮರುಚುನಾವಣೆಗೆ ಸ್ಪರ್ಧಿಸದಂತೆ ತಿದ್ದುಪಡಿ ತರಬೇಕು ಎಂದು ಸಂಸದೀಯ ಗಣ್ಯರು ಅಭಿಪ್ರಾಯ ಪಟ್ಟಿದ್ದಾರೆಂದು ವಿಧಾನ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

ಪಕ್ಷಾಂತರ ನಿಷೇಧ ಕಾಯ್ದೆಯ ಸಂವಿಧಾನದ 10ನೇ ಅನುಸೂಚಿಯಡಿ ಪೀಠಾಸೀನಾಧಿಕಾರಿಗಳ ಅಧಿಕಾರಗಳು ಮತ್ತು ಅದರಡಿ ರಚಿಸಲಾದ ನಿಯಮಗಳ ಮರುಪರಿಶೀಲನೆ ಸಂಬಂಧ ಸಂಸದೀಯ ಗಣ್ಯರೊಂದಿಗೆ ಸಭೆ ನಡೆಸಿದ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಮುಖ್ಯಮಂತ್ರಿ ಯಡಿಯೂರಪ್ಪ, ವಿಧಾನಸಭೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಸೇರಿ 25 ಸಂಸದೀಯರೊಂದಿಗೆ ಸಮಾಲೋಚನೆ ನಡೆಸಲಾಗಿದೆ. ಪ್ರಸಕ್ತ ರಾಜಕೀಯ ಪರಿಸ್ಥಿತಿ, ರಾಜಕೀಯ ಪಕ್ಷಗಳು, ಚುನಾವಣಾ ಆಯೋಗ, ನ್ಯಾಯಾಂಗ ವ್ಯವಸ್ಥೆ ಬಗ್ಗೆಯೂ ಗಣ್ಯರು ಅಭಿಪ್ರಾಯ ನೀಡಿದ್ದಾರೆ. ಶಾಸಕಾಂಗದ ಘನತೆ, ಗೌರವವನ್ನೂ ಕಾಪಾಡುವ ಬಗ್ಗೆ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಜೊತೆಗೆ ಚುನಾವಣೋತ್ತರ ಮೈತ್ರಿಗೂ ಅವಕಾಶ ನೀಡಬಾರದೆಂಬ ಸಲಹೆ ಕೇಳಿಬಂದಿದೆ ಎಂದು ಹೇಳಿದರು. ಅನರ್ಹತೆ ವಿಚಾರದಲ್ಲಿ ನ್ಯಾಯಾಂಗದ ಹಸ್ತಕ್ಷೇಪವಿರಬಾರದು ಸ್ಪೀಕರ್‌ಗೆ ಪರಮಾಧಿಕಾರವಿರಬೇಕೆಂದು ಎಲ್ಲರೂ ಅಭಿಪ್ರಾಯಪಟ್ಟಿದ್ದಾರೆ. ಜೂನ್ 10ರೊಳಗೆ ಸಾರ್ವಜನಿಕರು ವಿಧಾನ ಸಭೆಯ ಕಾರ್ಯದರ್ಶಿಗಳಿಗೆ ತಮ್ಮ ಅಭಿಪ್ರಾಯ ನೀಡಬೇಕು. ಜೂನ್ 5 ರಂದು ವಿಧಾನ ಪರಿಷತ್ತಿನ ಸದಸ್ಯರೊಂದಿಗೆ ಚರ್ಚಿಸಲಾಗುವುದು ಎಂದರು.

**ಅನರ್ಹರಿಗೆ 10 ವರ್ಷ ಚುನಾವಣೆಗೆ ಸ್ಪರ್ಧೆ ಬೇಡ:** ಪಕ್ಷಾಂತರ ನಿಷೇಧ ಕಾಯ್ದೆಯಡಿ ಶಾಸಕರನ್ನು ಸದಸ್ಯತ್ವದಿಂದ ಅನರ್ಹಗೊಳಿಸುವ ಅಧಿಕಾರ ವಿಧಾನ ಸಭಾಧ್ಯಕ್ಷರಿಗೆ ಇರಬೇಕು. ಅನರ್ಹಗೊಂಡವರು 10 ವರ್ಷ ಚುನಾವಣೆಗೆ ಸ್ಪರ್ಧಿಸಲು, ಯಾವುದೇ ರಾಜಕೀಯ ಅಧಿಕಾರ ಅನುಭವಿಸಲು ಅವಕಾಶವಿರಬಾರೆಂದು ವಿಧಾನ ಸಭೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಪ್ರತಿಪಾದಿಸಿದರು.

ಪಕ್ಷಾಂತರ ನಿಷೇಧ ಕಾಯ್ದೆ ನಿಯಮಗಳ ಮರು ಪರಿಶೀಲನೆಗೆ ಅಭಿಪ್ರಾಯ ಸಂಗ್ರಹಕ್ಕಾಗಿ ವಿಧಾನ ಸಭಾಧ್ಯಕ್ಷರು ನಡೆಸಿದ ಸಂಸದೀಯ ಗಣ್ಯರ ಸಭೆಯಲ್ಲಿ ಪಾಲ್ಗೊಂಡ ಬಳಿಕ ಪ್ರತಿಕ್ರಿಯಿಸಿ ಕಾಯ್ದೆಯಲ್ಲಿನ ಕೆಲ ನ್ಯೂನತೆ ಬಗ್ಗೆ ಚರ್ಚಿಸಲು ಸಮಿತಿ ರಚನೆಯಾಗಿದ್ದು, ಅದರಂತೆ ವಿಧಾನ ಸಭಾಧ್ಯಕ್ಷರು ಅಭಿಪ್ರಾಯ ಕೇಳಿದ್ದಾರೆ. ಪಕ್ಷಾಂತರ ನಿಷೇಧ ಕಾಯ್ದೆಯಡಿ ಅನರ್ಹಗೊಂಡವರು ಎರಡು ಚುನಾವಣೆಗೆ ಸ್ಪರ್ಧಿಸಬಾರದು ಹಾಗೂ ಅವರಿಗೆ ಯಾವುದೇ ಅಧಿಕಾರ ಕೊಡಬಾರದು ಎಂದು ನಾನು ಸ್ಪಷ್ಟವಾಗಿ ಅಭಿಪ್ರಾಯ ಹೇಳಿದ್ದೇನೆಂದು ಹಾಗೂ ಶಾಸಕರು, ಪರಿಷತ್ ಸದಸ್ಯರೊಂದಿಗೆ ಸಾರ್ವಜನಿಕ ಅಭಿಪ್ರಾಯವನ್ನು ಸಂಗ್ರಹಿಸುವುದಾಗಿ ಸ್ಪೀಕರ್ ಹೇಳಿದ್ದಾರೆ.

ಒಟ್ಟಾರೆ ಪಕ್ಷಾಂತರ ಕಾಯ್ದೆ ಯಾವುದೇ ನ್ಯೂನತೆ ಇಲ್ಲದೆ ಪಕ್ಷಾಂತರ ಮಾಡಿದವರಿಗೆ ಶಿಕ್ಷೆಯಾಗುವಂತಾಗಬೇಕು. ಪ್ರಜಾಪ್ರಭುತ್ವದ ಬೇರುಗಳಿಗೆ ಪಕ್ಷಾಂತರ ಮಾರಕವಾಗಿದೆ. ಪ್ರಜಾಪ್ರಭುತ್ವದ ಬೇರುಗಳನ್ನು ಗಟ್ಟಿ ಮಾಡುವ ಕೆಲಸ ಮಾಡಬೇಕೆಂದು ಸಿದ್ದರಾಮಯ್ಯನವರು ತಿಳಿಸಿದರು.

ಆಧಾರ: ಉದಯವಾಣಿ, ದಿನಾಂಕ:29.05.2020



**ದಿನಾಂಕ: 28–05–2020 ರಂದು, ಭಾರತ ಸಂವಿಧಾನದ ಹತ್ತನೆಯ ಅನುಸೂಚಿ ಅಡಿಯಲ್ಲಿ ಪೀಠಾಸೀನಾಧಿಕಾರಿಗಳ ಅಧಿಕಾರಗಳು ಹಾಗೂ ಅದರ ಅಡಿಯಲ್ಲಿ ರಚಿಸಲಾದ ನಿಯಮಗಳ ಮರು ಪರಿಶೀಲನೆ ಬಗ್ಗೆ ಸನ್ಮಾನ್ಯ ಮುಖ್ಯಮಂತ್ರಿಯವರೂ ಸೇರಿದಂತೆ ವಿಧಾನ ಸಭೆಯ ಸಂಸದೀಯ ಗಣ್ಯರುಗಳೊಂದಿಗೆ ಸನ್ಮಾನ್ಯ ಸಭಾಧ್ಯಕ್ಷರ ಸಮಾಲೋಚನಾ ಸಭೆ ಹಾಗೂ ಅಭಿಪ್ರಾಯ ಸಂಗ್ರಹ.**



**ದಿನಾಂಕ: 04–06–2020 ರಂದು, ಭಾರತ ಸಂವಿಧಾನದ ಹತ್ತನೆಯ ಅನುಸೂಚಿ ಅಡಿಯಲ್ಲಿ ಪೀಠಾಸೀನಾಧಿಕಾರಿಗಳ ಅಧಿಕಾರಗಳು ಹಾಗೂ ಅದರ ಅಡಿಯಲ್ಲಿ ರಚಿಸಲಾದ ನಿಯಮಗಳ ಮರು ಪರಿಶೀಲನೆ ಬಗ್ಗೆ ವಿಧಾನ ಪರಿಷತ್ತಿನ ಸನ್ಮಾನ್ಯ ಸಭಾಪತಿಯವರು ಹಾಗೂ ವಿಧಾನ ಪರಿಷತ್ತಿನ ಸಂಸದೀಯ ಗಣ್ಯರುಗಳೊಂದಿಗೆ ಸನ್ಮಾನ್ಯ ಸಭಾಧ್ಯಕ್ಷರ ಸಮಾಲೋಚನಾ ಸಭೆ ಹಾಗೂ ಅಭಿಪ್ರಾಯ ಸಂಗ್ರಹ.**

**ದಿನಾಂಕ: 05–06–2020 ರಂದು ವಿಶ್ವ ಪರಿಸರ ದಿನದ ಅಂಗವಾಗಿ ಸನ್ಮಾನ್ಯ ಸಭಾಪತಿ ಹಾಗೂ ಸನ್ಮಾನ್ಯ ಸಭಾಧ್ಯಕ್ಷರು ಅವರುಗಳು ಶಾಸಕರ ಭವನದ ಆವರಣದಲ್ಲಿ ಗಿಡ ನೆಡುವ ಮೂಲಕ ಪರಿಸರ ದಿನವನ್ನು ಆಚರಿಸಿದರು**



**ದಿನಾಂಕ: 06–06–2020 ರಂದು ಮಾಜಿ ಮುಖ್ಯಮಂತ್ರಿಗಳಾದ ದಿವಂಗತ ಡಿ.ದೇವರಾಜ ಅರಸು ಅವರ 38 ನೇ ಪುಣ್ಯಸ್ಮರಣೆ ದಿನದಂದು ಅವರ ಭಾವಚಿತ್ರಕ್ಕೆ ಸನ್ಮಾನ್ಯ ಸಭಾಧ್ಯಕ್ಷರಿಂದ ಮಾಲಾರ್ಪಣೆ**



ದಿನಾಂಕ: 25–06–2020 ಮತ್ತು 26–06–2020 ರಂದು, ಭಾರತ ಸಂವಿಧಾನದ ಹತ್ತನೆಯ ಅನುಸೂಚಿ ಅಡಿಯಲ್ಲಿ ಪೀಠಾಸೀನಾಧಿಕಾರಿಗಳ ಅಧಿಕಾರಗಳು ಹಾಗೂ ಅದರ ಅಡಿಯಲ್ಲಿ ರಚಿಸಲಾದ ನಿಯಮಗಳ ಮರು ಪರಿಶೀಲನೆ ಬಗ್ಗೆ ಸನ್ಮಾನ್ಯ ಸಭಾಧ್ಯಕ್ಷರು ರಾಜ್ಯದ ಹಿಂದಿನ ಅಡ್ವೋಕೇಟ್ ಜನರಲ್ ಅವರುಗಳೊಂದಿಗೆ ಸಮಾಲೋಚನೆ ನಡೆಸಿ ಅವರುಗಳ ಅಭಿಪ್ರಾಯ ಪಡೆದರು.

1. ಶ್ರೀ ಉದಯ ಹೊಳ್ಳ ಅವರೊಂದಿಗೆ:



2. ಶ್ರೀ ಅಶೋಕ್ ಹಾರ್ನಳ್ಳಿ ಅವರೊಂದಿಗೆ:



**3. ಪ್ರೊ.ರವಿವರ್ಮಕುಮಾರ್ ಅವರೊಂದಿಗೆ:**




**4. ಶ್ರೀ ಮಧುಸೂದನ ನಾಯಕ್ ಅವರೊಂದಿಗೆ:**



**ದಿನಾಂಕ: 30–06–2020ರಂದು ನಿವೃತ್ತಿ ಹೊಂದಿದ ವಿಧಾನ ಪರಿಷತ್ತಿನ ಸದಸ್ಯರುಗಳಿಗೆ ಸನ್ಮಾನ್ಯ ಸಭಾಪತಿಯವರ ಅಧ್ಯಕ್ಷತೆಯಲ್ಲಿ ದಿನಾಂಕ 21–6–2020ರಂದು ಏರ್ಪಡಿಸಲಾದ ಬೀಳ್ಕೊಡುಗೆ ಸಮಾರಂಭದ ಸಂದರ್ಭ.**



**ದಿನಾಂಕ: 10–07–2020ರಂದು ಏರ್ಪಡಿಸಲಾದ ಬೀಳ್ಕೊಡುಗೆ ಸಮಾರಂಭ**

